# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಪಿ.ಎ.ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ-ಆದೇಶ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ, ರವರ ಆದೇಶ ಸಂಖ್ಯೆ: ಆಡಳಿತ(1)ಸಿಸಿಎ-03/2017-18, ದಿನಾಂಕ: 07-06-2017.
2. ಶ್ರೀ ಪಿ.ಎ.ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರ ಮೇಲ್ಮನವಿ ದಿನಾಂಕ: 15-06-2017.
3. ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:14-07-2017.

**ಪ್ರಸ್ತಾವನೆ :**

ಶ್ರೀ ಪಿ.ಎ.ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಸರ್ಜಾಪುರ ಗ್ರಾಮ ಪಂಚಾಯಿತಿ, ಆನೇಕಲ್ ತಾಲ್ಲೂಕು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ,

ಸದರಿ ಗ್ರಾಮ ಪಂಚಾಯಿತಿಯ ಚುನಾಯಿತ ಪ್ರತಿನಿಧಿಗಳೊಂದಿಗೆ ಹೊಂದಾಣಿಕೆ ಇಲ್ಲದೇ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾದ ಕಾರಣ ಸದರಿಯವರನ್ನು ಜಿಲ್ಲಾ ಪಂಚಾಯಿತಿ ಆದೇಶ ಸಂಖ್ಯೆ:ಆಡಳಿತ(5)ಗ್ರಾಪಂಅ-6/2017-18, ದಿನಾಂಕ:09-05-2017ರ ಆದೇಶದಂತೆ ಬೆಂಗಳೂರು ಉತ್ತರ ತಾಲ್ಲೂಕು, ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿಗೆ ವರ್ಗಾಯಿಸಿ ಆದೇಶಿಸಲಾಗಿತ್ತು.

ಸದರಿಯವರನ್ನು ಸರ್ಜಾಪುರ ಗ್ರಾಮ ಪಂಚಾಯಿತಿ ಕರ್ತವ್ಯದಿಂದ ಬಿಡುಗಡೆಗೊಳಿಸಿದ್ದರೂ ಸಹ ಸದರಿಯವರು ದಿನಾಂಕ:07-06-2017ರವರೆಗೆ ಕರ್ತವ್ಯ ವರದಿ ಮಾಡಿಕೊಂಡಿರುವುದಿಲ್ಲ ಎಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು ರವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ವರದಿ ಮಾಡಿದ್ದರು.

> "ಬೆಂಗಳೂರು ಜಿಲ್ಲೆಯ ನಾಲ್ಕು ತಾಲ್ಲೂಕುಗಳು ಬರಪೀಡಿತ ಜಿಲ್ಲೆ ಎಂದು ಘೋಷಿಸಿದ್ದರೂ ಸಹ ಮೇಲಾಧಿಕಾರಿಗಳ ಆದೇಶವನ್ನು ಪಾಲಿಸದೇ, ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮೇಲೆ ಓದಲಾದ(1)ರ ಆದೇಶದಲ್ಲಿ ಸದರಿ ನೌಕರರನ್ನು ಅಮಾನತ್ತುಗೊಳಿಸಿ ಆದೇಶಿಸಿದ್ದರು"

ಸದರಿ ಆದೇಶದ ವಿರುದ್ಧ ಶ್ರೀ ಪಿ.ಎ.ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿರವರು ದಿನಾಂಕ: 15-06-2017ರಂದು ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿರುತ್ತಾರೆ.

ಅರ್ಜಿದಾರರು ತಮ್ಮ ಮೇಲ್ಮನವಿಯಲ್ಲಿ ಈ ಕೆಳಕಂಡಂತೆ ತಮ್ಮ ಲಿಖಿತ ಹೇಳಿಕೆಯನ್ನು ದಾಖಲಿಸಿದ್ದರು.

- ತಾವು ದಿನಾಂಕ:15-05-2017ರಂದು ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು ಇಲ್ಲಿ ಕಾರ್ಯವರದಿ ಮಾಡಿಕೊಂಡಿದ್ದು, ತಾಲ್ಲೂಕು ಪಂಚಾಯತಿ ಕಛೇರಿಯಲ್ಲಿ ಕಾರ್ಯವರದಿ ಮಾಡಿಕೊಂಡಿರುವುದಕ್ಕೆ ದಾಖಲೆಗಳಲ್ಲಿ ಸ್ಪಷ್ಟವಾಗಿರುತ್ತದೆ.

- ದಿನಾಂಕ:25-05-2017ರ ಅಧಿಕೃತ ಜ್ಞಾಪನ ಪತ್ರದಂತೆ ತಮ್ಮನ್ನು ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿಗೆ ಸ್ಥಳ ನಿಯುಕ್ತಿ ಮಾಡಿರುವ ಬಗ್ಗೆ ತಮಗೆ ಮೌಖಿಕವಾಗಿ ಅಥವಾ ಲಿಖಿತವಾಗಿ ಯಾವುದೇ ಮಾಹಿತಿ ನೀಡಿರಲಿಲ್ಲ. ಅಧಿಕೃತ ಜ್ಞಾಪನವನ್ನು ಜಾರಿಗೊಳಿಸಿರುವ ಬಗ್ಗೆ ತಮ್ಮಿಂದ ಯಾವುದೇ ಸ್ವೀಕೃತಿಯನ್ನು ಪಡೆದಿರುವುದಿಲ್ಲ. ಆದರೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ , ಬೆಂಗಳೂರುರವರು ಉದ್ದೇಶಪೂರ್ವಕವಾಗಿ ತಾವು ಕಾರ್ಯವರದಿ ಮಾಡಿಕೊಂಡ ದಿನಾಂಕವನ್ನು 25-05-2017 ಎಂದು ಸುಳ್ಳು ದಿನಾಂಕವನ್ನು ನಮೂದಿಸಿರುತ್ತಾರೆ ಹಾಗೂ ಸದರಿ ಅಧಿಕೃತ ಜ್ಞಾಪನದ ಪ್ರತಿಯನ್ನು ನನಗೆ ದಿನಾಂಕ:25-05-2017ರಂದು ಜಾರಿ ಮಾಡದೆ, ದಿನಾಂಕ:07-06-2017ರಂದು ಜಾರಿ ಮಾಡಲಾಗಿದೆ.

- ಸದರಿ ಅಧಿಕೃತ ಜ್ಞಾಪನವನ್ನು ಸ್ವೀಕರಿಸಿದ ದಿನಾಂಕದಂದು ತಾವು ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯವರದಿ ಮಾಡಿಕೊಳ್ಳಲು ತೆರಳಿದ್ದು, ಅದೇ ದಿನ ತಮ್ಮನ್ನು ಜಿಲ್ಲಾ ಪಂಚಾಯಿತಿಯ ದಿನಾಂಕ:07-06-2017ರ ಆದೇಶದಂತೆ ಅಮಾನತ್ತಿನಲ್ಲಿಡಲಾದ ಆದೇಶವನ್ನು ಜಾರಿ ಮಾಡಲಾಯಿತು.

- ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯವರದಿ ಮಾಡಿಕೊಳ್ಳಲು ಅವಕಾಶ ನೀಡದೇ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸುಳ್ಳು ವರದಿ ನೀಡಿ ತಮ್ಮನ್ನು ಅಮಾನತ್ತುಗೊಳಿಸಲಾಗಿದೆ.

- ಅಮಾನತ್ತಿನ ಆದೇಶವು ವಾಸ್ತವಾಂಶಗಳಿಗೆ ವ್ಯತಿರಿಕ್ತವಾಗಿದೆ ಹಾಗೂ ಸುಳ್ಳು ಮಾಹಿತಿಗಳ ಆಧಾರದ ಮೇಲೆ ಮತ್ತು ದುರುದ್ದೇಶದಿಂದ ಮಾಡಲಾಗಿದೆ.

- ಅಮಾನತ್ತಿನಲ್ಲಿ ಮುಂದುವರಿಸಿರುವುದರಿಂದ ಆರ್ಥಿಕ ಹಾಗೂ ಮಾನಸಿಕವಾಗಿ ನನಗೆ ತೊಂದರೆಯುಂಟಾಗಿರುತ್ತದೆ. ಜೀವನಾಧಾರ ಭತ್ಯೆಯ ಆಧಾರದ ಮೇಲೆ ಅಗತ್ಯತೆಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಮೇಲಿನ ಅಂಶಗಳನ್ನು ಪರಿಗಣಿಸಿ, ಅಮಾನತ್ತು ಆದೇಶವನ್ನು ರದ್ದುಪಡಿಸಿ, ಕರ್ತವ್ಯಕ್ಕೆ ಅವಕಾಶ ಮಾಡಿಕೊಡಲು ಕೋರಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:24-07-2017ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಅರ್ಜಿದಾರರು ಹಾಜರಿದ್ದರು. ಅರ್ಜಿದಾರರ ಹೇಳಿಕೆಯನ್ನು ಪಡೆಯಲಾಯಿತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ದಿನಾಂಕ:05-08-2017ರ ವರದಿಯಲ್ಲಿ, ಕಾರ್ಯನಿರ್ವಾಹಕ ಅಧಿಕಾರಿಗಳ ವರದಿಯಂತೆ ಶ್ರೀ ಪಿ.ಎ.ಪೂಣಚ್ಚರವರು, ದಿನಾಂಕ:15-05-2017ರಂದು ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ಕರ್ತವ್ಯಕ್ಕೆ ವರದಿಮಾಡಿಕೊಂಡ ನಂತರ ಸ್ಥಳ ನಿಯುಕ್ತಿ ಆದೇಶ ಪಡೆಯಲು ತಾಲ್ಲೂಕು ಪಂಚಾಯಿತಿ ಕಛೇರಿಗೆ ಹಾಜರಾಗಿರುವುದಿಲ್ಲ ಹಾಗೂ ಹಾಜರಾತಿಯನ್ನು ನಮೂದಿಸಲು ಯಾವುದೇ ಕೋರಿ ಯಾವುದೇ ಮನವಿಯನ್ನು ಸಲ್ಲಿಸಿರುವುದಿಲ್ಲ. ಅಂಚೆ ಮೂಲಕ ತಮ್ಮ ತಾಯಿಯವರ ಅನಾರೋಗ್ಯದ ಕಾರಣ ರಜೆ ಮಂಜೂರು ಮಾಡುವಂತೆ ಕೋರಿರುತ್ತಾರೆ . ಆದರೇ ರಜೆ ಪ್ರಪತ್ರವನ್ನು ಸಹ ಸಲ್ಲಿಸಿರುವುದಿಲ್ಲ ಎಂದು ವರದಿ ಮಾಡಿರುತ್ತಾರೆ.

ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಉತ್ತರ ತಾಲ್ಲೂಕುರವರು ತಮ್ಮ ಹೇಳಿಕೆಯಲ್ಲಿ ಶ್ರೀ ಪಿ.ಎ.ಪೂಣಚ್ಚ ರವರು ದಿನಾಂಕ:25-05-2017ರಂದು ಕಾರ್ಯವರದಿ ಮಾಡಿಕೊಂಡಿದ್ದು, ಈ ಕಛೇರಿಯಿಂದ ದಿನಾಂಕ:07-06-2017ರವರೆಗೆ ಅಧಿಕೃತ ಜ್ಞಾಪನವನ್ನು ಸ್ವೀಕರಿಸಿರುವುದಿಲ್ಲ ಹಾಗೂ ದಿನಾಂಕ:25-05-207ರ ಅಧಿಕೃತ ಜ್ಞಾಪನದಂತೆ ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿಗೆ ಕಾರ್ಯವರದಿಮಾಡಿಕೊಂಡಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿದೆ ಹಾಗೂ ಅರ್ಜಿದಾರರ ಹೇಳಿಕೆಯನ್ನು ಪರಿಶೀಲಿಸಿದೆ ಹಾಗೂ ಸದರಿ ನೌಕರರ ಮೇಲ್ಮನವಿಯನ್ನು ಪುರಸ್ಕರಿಸದೆ ಸದರಿ ನೌಕರರ ವಿರುದ್ಧ ಕೈಗೊಂಡಿರುವ ಇಲಾಖಾ ವಿಚಾರಣೆಯನ್ನು ಮುಂದುವರಿಸಲು ಸರ್ಕಾರವು ನಿರ್ಣಯಿಸಿದೆ.

ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 563 ಗ್ರಾಪಂಕಾ 2017**
**ಬೆಂಗಳೂರು, ದಿನಾಂಕ:10-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಗಳು 1957ರ ನಿಯಮ 25(1)ರಡಿಯಲ್ಲಿ ಶ್ರೀ ಪಿ.ಎ.ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂತು ನಗರ ಜಿಲ್ಲೆ ಇವರ ಮೇಲ್ಮನವಿಯನ್ನು ಪರಿಶೀಲಿಸಿದೆ. ಅರ್ಜಿದಾರರ ಮೇಲ್ಮನವಿಯನ್ನು ಪುರಸ್ಕರಿಸದೆ ಸದರಿ ನೌಕರರ ವಿರುದ್ಧ ಕೈಗೊಂಡಿರುವ ಇಲಾಖಾ ವಿಚಾರಣೆಯನ್ನು ಮುಂದುವರೆಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
4) ಶ್ರೀ ಪಿ.ಎ..ಪೂಣಚ್ಚ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊಣ್ಣೇನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
5) ಶಾಖಾ ರಕ್ಷಕ ಪ್ರತಿ
6) ಗಣಕ ಕೋಶ